ಆರ್. ಡಬ್ಲ್ಯೂ ಃ **1 -** ನಾಗರಾಜು

ಸಾಕ್ಷಿಗೆ ದಿನಾಂಕಃ **16.07.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎದುರುದಾರರ ಪರಃ ಶ್ರೀ ವಕೀಲರ ಮೂಲಕ ಃ

ನಾನು ಈ ದಿನ ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸುತ್ತೇನೆ.

ವಿಮಾ ಪಾಲಿಸಿಯನ್ನು ನಿ.ಆರ್. **1** ಎಂದು ಗುರುತಿಸಲಾಯಿತು.

ಪಾಟೀ ಸವಾಲು: ಅರ್ಜಿದಾರರ ಪರಃ ಶ್ರೀ ವಕೀಲರ ಮೂಲಕ ಃ

ಅರ್ಜಿದಾರರು ಮೋಟಾರ್ ವಾಹನ ಕಾಯ್ದೆ ಕಲಂ **163** ಎ ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ ಎಂದರೆ ಸರಿ. **1** ನೇ ಎದುರುದಾರರು ವಿಮೆ ಪಡೆಯುವಾಗ ಐ.ಎಂ.ಟಿ. ಕಲಂ **26, 27, 28** ರ ಪ್ರಕಾರ ಪ್ರೀಮಿಯಂನ್ನು ಪಡೆದಿರುತ್ತಾರೆ ಎಂದರೆ ಸರಿ. ಆದಕಾರಣ ನಮ್ಮ ಕಂಪನಿಯವರು ಅರ್ಜಿದಾರರಿಗೆ ಪರಿಹಾರ ನೀಡಲು ಬಾದ್ಯಸ್ಥರು ಎಂದರೆ ಸರಿಯಲ್ಲ.

**2.** ಅರ್ಜಿದಾರರಿಗೆ ತೀವ್ರ ಸ್ವರೂಪದ ಗಾಯವಾಗಿ ಆಸ್ಪತ್ರೆಯಲ್ಲಿ ದಾಖಲಾಗಿದ್ದನ್ನು ದುರುಪಯೋಗ ಪಡಿಸಿಕೊಂಡು ನಮ್ಮ ಕಂಪನಿ ಮತ್ತು **1** ನೇ ಎದುರುದಾರರು ಸೇರಿ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸುವಂತೆ ಮಾಡಿರುತ್ತೇವೆ ಎಂದರೆ ಸರಿಯಲ್ಲ. ವಿಮೆ ಚಾಲ್ತಿಯಲ್ಲಿ ಇರುವುದರಿಂದ ನಾವು ಪರಿಹಾರ ಕೊಡಲು ಬಾದ್ಯಸ್ಥರು ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಎಂ.ಎ.ಸಿ.ಟಿ. ಮಳವಳ್ಳಿ.